ಇಮಾಮರು ತಲೆ ಎತ್ತುವುದಕ್ಕಿಂತ ಮೊದಲು ತಲೆ ಎತ್ತುವವರು, ಅಲ್ಲಾಹು ಅವರ ತಲೆಯನ್ನು ಕತ್ತೆಯ ತಲೆಯಾಗಿ, ಅಥವಾ ಅವರ ರೂಪವನ್ನು ಕತ್ತೆಯ ರೂಪವಾಗಿ ಮಾರ್ಪಡಿಸುವನು ಎಂದು ಭಯಪಡುವುದಿಲ್ಲವೇ?

ಅಬೂ ಹುರೈರ (ಅಲ್ಲಾಹು ಅವರ ಬಗ್ಗೆ ಸಂಪ್ರೀತನಾಗಲಿ) ರಿಂದ ವರದಿ. ಪ್ರವಾದಿಯವರು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಹೇಳಿದರು: "ಇಮಾಮರು ತಲೆ ಎತ್ತುವುದಕ್ಕಿಂತ ಮೊದಲು ತಲೆ ಎತ್ತುವವರು, ಅಲ್ಲಾಹು ಅವರ ತಲೆಯನ್ನು ಕತ್ತೆಯ ತಲೆಯಾಗಿ, ಅಥವಾ ಅವರ ರೂಪವನ್ನು ಕತ್ತೆಯ ರೂಪವಾಗಿ ಮಾರ್ಪಡಿಸುವನು ಎಂದು ಭಯಪಡುವುದಿಲ್ಲವೇ?" [صحيح] [متفق عليه]

ಇಮಾಮರು ತಲೆ ಎತ್ತುವುದಕ್ಕಿಂತ ಮೊದಲು ತಲೆ ಎತ್ತುವವರಿಗೆ, ಅಲ್ಲಾಹು ಅವರ ತಲೆಯನ್ನು ಕತ್ತೆಯ ತಲೆಯಾಗಿ, ಅಥವಾ ಅವರ ರೂಪವನ್ನು ಕತ್ತೆಯ ರೂಪವಾಗಿ ಪರಿವರ್ತಿಸುವನು ಎಂದು ಪ್ರವಾದಿಯವರು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಇಲ್ಲಿ ಉಗ್ರ ಎಚ್ಚರಿಕೆಯನ್ನು ನೀಡುತ್ತಿದ್ದಾರೆ.

http://www.sunnah.global/hadeeth/kn/show/3086